Date: July 23, 2026

To,

The Manager
Listing Department
National Stock Exchange of India Limited (NSE)
Exchange Plaza, 5th Floor
Plot No. C/1, G-Block
Bandra-Kurla Complex
Bandra (E), Mumbai - 400 051
Symbol: SAGILITY

The Manager
Listing Department
BSE Limited (BSE)
Phiroze Jeejeebhoy Towers
Dalal Street
Mumbai - 400 001
Scrip Code:544282

Dear Sir/Ma'am,

Subject: Newspaper Advertisement pursuant to Regulation 47 of SEBI (Listing Obligations and Disclosure Requirements) Regulations, 2015

Pursuant to Regulation 47 of the SEBI (Listing Obligations and Disclosure Requirements) Regulations, 2015, please find enclosed copies of the newspaper advertisements published by Sagility Limited, pertaining to the unaudited financial results for the quarter ended June 30, 2026, published in Financial Express (English newspaper) and Vishwavani News (Kannada newspaper) on July 23, 2026.

The details are also being made available on the Company's website https://sagility.com/

This is for your kind information and record.

Thanking You,

For Sagility Limited

SATISHKUMAR SAKHARAYAPATTANA SEETHARAMAIAH
Digitally signed by SATISHKUMAR SAKHARAYAPATTANA SEETHARAMAIAH
Date: 2026.07.23 18:12:00 +05'30'

Satishkumar Sakharayapattana Seetharamaiah
Company Secretary & Compliance Officer
M. No. A16008

ವಿದ್ಯುತ್ ಕಂಬಕ್ಕೆ ಕಾರು ಡಿಕ್ಕಿ

ಬೆಂಗಳೂರು: ನಗರದ ಕೆ.ಆರ್.ಪುರ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಸಿಂಗಯ್ಯನಪಾಳ್ಯ ಬಸ್ ನಿಲ್ದಾಣದ ಬಳಿ ಟೆಸ್ಟ್ ಡ್ರೈವ್ ವೇಳೆ ಮಹಿಳೆ ಚಾಲನೆ ಮಾಡುತ್ತಿದ್ದ ಕಾರು ನಿಯಂತ್ರಣ ತಪ್ಪಿ ಪಾದಾಚಾರಿ ಮೇಲೆ ಹತ್ತಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಶೋ ರೂಮ್‌ನಿಂದ ಟೆಸ್ಟ್ ಡ್ರೈವ್‌ಗಾಗಿ ತೆಗೆದುಕೊಂಡಿದ್ದ ಕೆಂಪು ಬಣ್ಣದ ಕಾರನ್ನು ಮಹಿಳೆ ಚಾಲನೆ ಮಾಡುತ್ತಿದ್ದ ವೇಳೆ ಏಕಾಏಕಿ ನಿಯಂತ್ರಣ ತಪ್ಪಿದೆ. ಪರಿಣಾಮ ಕಾರು ಪಾದಾಚಾರಿ ಮೇಲೆ ಹತ್ತಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕಾರಿನ ಮುಂಭಾಗ ಸಂಪೂರ್ಣ ಜಖಂ ಗೊಂಡಿದೆ. ಘಟನೆಯಲ್ಲಿ ಚಾಲಕಿ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದು, ಸ್ಥಳದಲ್ಲಿದ್ದ ಪಾದಚಾರಿಗೂ ಯಾವುದೇ ಗಂಭೀರ ಗಾಯಗಳಾಗಿಲ್ಲ. ಮಾಹಿತಿ ತಿಳಿಯುತ್ತಿದ್ದಂತೆ ಕೆ.ಆರ್.ಪುರ ಸಂಚಾರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಹಿಳೆ ವಿರುದ್ಧ ನಿರ್ಲಕ್ಷ್ಯದಿಂದ ವಾಹನ ಚಲಾಯಿಸಿದ ಆರೋಪದ ಅಡಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಅಪಘಾತಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿಸಿದ್ದಾರೆ. ಅಪಘಾತ ನಡೆದ ಸ್ಥಳದ ಸಮೀಪವೇ ಬಸ್ ನಿಲ್ದಾಣವಿದ್ದ ಹಿನ್ನೆಲೆಯಲ್ಲಿ, ಕಾರು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆಯದೇ ಇದ್ದಿದ್ದರೆ ನೇರವಾಗಿ ಬಸ್ ನಿಲ್ದಾಣಕ್ಕೆ ನುಗ್ಗುವ ಸಾಧ್ಯತೆ ಇತ್ತು. ಹೀಗಾಗಿ ದೊಡ್ಡ ಅನಾಹುತವೊಂದು ತಪ್ಪಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಬೆಳೆಹಾನಿಗೆ ಎಕರೆಗೆ 50,000 ರು. ಪರಿಹಾರ ನೀಡಿ: ಆರ್.ಅಶೋಕ

ಬರಗಾಲ ಘೋಷಿಸಿ, ಸಾಲ ಮನ್ನಾ ಮಾಡಿ

ಬೆಂಗಳೂರು: ರಾಜ್ಯದಲ್ಲಿ ಬರಗಾಲ ಹೆಚ್ಚಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಕಲ್ಯಾಣ ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಜನರು ಗುಳೆ ಹೋಗುತ್ತಿದ್ದಾರೆ. ಕೂಡಲೇ ಕಾಂಗ್ರೆಸ್ ಸರಕಾರ ಬರಗಾಲ ಘೋಷಣೆ ಮಾಡಿ ರೈತರಿಗೆ ಎಕರೆಗೆ 50,000 ರು. ಪರಿಹಾರ ನೀಡಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ಬರ ಇದ್ದರೂ ಕಾಂಗ್ರೆಸ್ ಮುಖಂಡರು, ಸಚಿವರು, ಶಾಸಕರು ಜಾಲಿ ಮೂಡಲ್ಲಿ ದೆಹಲಿಗೆ ಹೋಗಿದ್ದಾರೆ. ಇದು ಕರ್ನಾಟಕದ ಬರ ಅಲ್ಲ, ಇದು ಜನರ, ರೈತರ ಹಣಬರಹ ಎನ್ನಬೇಕಿದೆ. ಬಿಜೆಪಿ ಅವಧಿಯಲ್ಲಿ ಬರಗಾಲ ಅಥವಾ ಪ್ರವಾಹದಲ್ಲಿ ಮುಂಚೂಣಿ ಯಲ್ಲಿದ್ದು ಕೆಲಸ ಮಾಡಿದ್ದು ಹಾಗೂ ದುಪ್ಪಟ್ಟು ಪರಿಹಾರ ನೀಡಲಾಗಿತ್ತು. ಆದರೆ ಸಿಎಂ ಡಿ.ಕೆ.ಶಿವಕುಮಾರ್ ಬೆಳೆ ಬೆಳೆಯ ಬಾರದು ಎಂದು ಕರೆ ನೀಡುತ್ತಾರೆ. ಹಾಗಾದರೆ ರೈತರು ಏನು ಮಾಡಬೇಕು? ಎಂದು ಅವರೇ ಹೇಳಬೇಕು. ರೈತರಿಗಾಗಿ ಸಾರ್ವತ್ರಿಕ ರಜೆ ಕೊಟ್ಟು ಬಿಡಲಿ. ವಿಬಿ ಜಿ ರಾಮ್ ಜಿ ಯೋಜನೆ ನೆಗೆ ಮೊದಲು ವಿರೋಧಿಸಿ ಈಗ ಜಾರಿ ಮಾಡುವುದಾಗಿ ನಾಟಕ ಆಡುತ್ತಿದ್ದಾರೆ. ಕಾವೇರಿ ನೀರನ್ನು ಯಾರಿಗೂ ಬಳಸಲು ಬಿಡುತ್ತಿಲ್ಲ. ಆದರೆ ತಮಿಳುನಾಡಿಗೆ ನಿರಂತರವಾಗಿ ಕಾವೇರಿ ನೀರು ಹರಿಯುತ್ತಿದೆ ಎಂದು ದೂರಿದರು.

ಕಳೆದ ವಾರ ಮಳವಳ್ಳಿ ಭಾಗದಲ್ಲಿ ಒಣಗಿರುವ ಕಬ್ಬು ವೀಕ್ಷಿಸಿದ್ದೆ. 157 ತಾಲೂಕುಗಳಲ್ಲಿ ಬರ ಇದೆ. ಶೇ.80 ರಷ್ಟು ಕೃಷಿ ಚಟುವಟಿಕೆ ಸ್ಥಗಿತಗೊಂಡಿದೆ. ಜಾನುವಾರುಗಳಿಗೆ ಮೇವಿಲ್ಲದೆ ಸಮಸ್ಯೆ ಸೃಷ್ಟಿಯಾಗಿದೆ. ಸಮಸ್ಯೆಯಾಗಿದೆ. ರೈತರು ದನಕರುಗಳನ್ನು ಕಟುಕರಿಗೆ ಮಾರುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಂದಾಯ ಸಚಿವರು ಜಿಲ್ಲಾಧಿಕಾರಿಗಳಿಂದ ವರದಿ ಕೇಳಿದ್ದಾರೆ. 10,000 ಕೋಟಿ ಕೇಂದ್ರ ಸರಕಾರ ಕೊಡಬೇಕು ಎಂದಿದ್ದಾರೆ. ವಾಸ್ತವ ಸ್ಥಿತಿ ಅಧ್ಯಯನ ಮಾಡಿ ಕೇಂದ್ರಕ್ಕೆ ವರದಿ ಸಲ್ಲಿಸದೆ ಅನುದಾನ ಹೇಗೆ ಬಿಡುಗಡೆ ಆಗಲು ಸಾಧ್ಯ? ಇವರು ವರದಿ ಸಿದ್ಧಪಡಿಸಿ ಕೇಂದ್ರಕ್ಕೆ ಸಲ್ಲಿಸಿ ಪರಿಹಾರ ಕೇಳುವುದು ಯಾವಾಗ? ಅದಕ್ಕೆ ಮೊದಲು ಎಸ್‌ಡಿಆರ್‌ಎಫ್ ನಿಧಿಯಿಂದ ಹಣ ಬಿಡುಗಡೆ ಮಾಡಿ ಸಮರೋಪಾದಿಯಲ್ಲಿ ಪರಿಹಾರ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ 5,862 ಕೆರೆಗಳು ಬರಿದಾಗಿವೆ. ಮೂರು ತಿಂಗಳ ಹಿಂದ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದ್ದಾಗಲೇ ತಯಾರಿ ಮಾಡಿಕೊಳ್ಳಬೇಕಿತ್ತು. ಸರಕಾರದ ಖಜಾನೆ ಖಾಲಿಯಾಗಿರು ವುದರಿಂದ ಇವರ ಹಣ ಬಿಡುಗಡೆ ಮಾಡಲು ಸಾಧ್ಯವಾಗುತ್ತಿಲ್ಲ. ಜಲಾಶಯ, ಕೆರೆಗಳು ಕೂಡ ಖಾಲಿಯಾಗಿವೆ. ಲಿಂಗನಮಕ್ಕಿ, ಸೂಪಾ, ವರಾಹಿ ಜಲಾಶಯಗಳಲ್ಲಿ ಶೇ.23, ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ಶೇ.51 ಮಾತ್ರ ನೀರಿದೆ. ಕೃಷ್ಣ ಕಣಿವೆಯ ಜಲಾಶಯಗಳಲ್ಲಿ ಶೇ.48 ನೀರಿದೆ. ಪರಮೇಶ್ವರ್ ಅವರ ವರದಿ ಬರುವ ವೇಳೆಗೆ ಎಲ್ಲರೂ ವಲಸೆ ಹೋಗಿರುತ್ತಾರೆ ಎಂದರು.

ತಾಲೂಕಿಗೆ 20 ಕೋಟಿ ರು. ಕೊಡಿ

ಬರಗಾಲದ ಬಗ್ಗೆ ಪತ್ರ ಬರೆದು ಸಲಹೆ ನೀಡಿದ್ದೇನೆ. ಸರಕಾರ ಕೂಡಲೇ ಬರಗಾಲ ಘೋಷಣೆ ಮಾಡಿ, ಪ್ರತಿ ತಾಲೂಕಿಗೆ 20 ಕೋಟಿ ರು. ಬಿಡುಗಡೆ ಮಾಡಬೇಕು. ಈಗಾಗಲೇ ತಾಲೂಕಿಗೆ ತಲಾ ಒಂದು ಕೋಟಿ ರು.ಘೋಷಣೆ ಮಾಡಿದ್ದರೂ. ಆ ಹಣ ಇನ್ನೂ ಬಂದಿಲ್ಲ. ಇಷ್ಟು ಕಡಿಮೆ ಹಣದಿಂದ ಬೋರ್‌ವೆಲ್ ಪುನಶ್ಚೇತನ ಮಾಡಲು ಕೂಡ ಸಾಧ್ಯವಿಲ್ಲ. ಪ್ರತಿ ಎಕರೆಗೆ 50,000 ರು. ಪರಿಹಾರ ನೀಡಬೇಕು. ಯಾವುದೇ ರಾಜ್ಯಗಳಿಗೆ ನೀರು ಹರಿಸಬಾರದು. ಇಲ್ಲಿನ ಮೇವನ್ನು ಬೇರೆ ರಾಜ್ಯಕ್ಕೆ ಮಾರಾಟ ಮಾಡುವ ಜಾಲ ಹುಟ್ಟಿಕೊಂಡಿದ್ದು, ಅದನ್ನು ತಡೆಗಟ್ಟಬೇಕು. ಮಾತು ಕೊಟ್ಟಂತೆಯೇ ಮುಖ್ಯಮಂತ್ರಿಗಳು ಸಾಲಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

ಎಐ ಸಲಹೆ ಪಡೆದು ಕೊಲೆಗೆ ಸಂಚು

ಬೆಂಗಳೂರು: ಅಪರಾಧವೊಂದನ್ನು ಎಸಗಲು ಕೃತಕ ಬುದ್ಧಿಮತ್ತೆಯ ಸಹಾಯವನ್ನು ಪಡೆದ ವಿಲಕ್ಷಣ ಪ್ರಕರಣ ಗಳಲ್ಲಿ ನಗರದಲ್ಲಿ ನಡೆದ ತ್ರಿವಳಿ ಕೊಲೆ ಪ್ರಕರಣವೂ ಒಂದಾಗಿದೆ.

ಈ ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರು, ಆರೋಪಿ ಕೆನ್ನೆತ್ (25) ಮತ್ತು ಆತನ ಪ್ರಿಯತಮೆ ಶ್ವೇತಾ (24) ಎಸಗಿದ ಕೃತ್ಯದ ಹಿಂದೆ ಅಡಗಿರುವ ಕ್ರೂರ ಯೋಜನೆ ಕಂಡು ಬೆಚ್ಚಿಬಿದ್ದಿದ್ದಾರೆ. ಕೊಲೆ ಪ್ರಕರಣದ ಮುಖ್ಯ ಆರೋಪಿ ಕೆನ್ನೆತ್, ಕೊಲೆ ಆರು ತಿಂಗಳಿಂದ ಎಐ ಚಾಟ್‌ಬಾಟ್‌ನೊಂದಿಗೆ ನಿರಂತರವಾಗಿ ಚಾಟ್ ಮಾಡುತ್ತಿದ್ದ ಎಂಬುದು ತನಿಖೆಯಲ್ಲಿ ಬಹಿರಂಗವಾಗಿದೆ. ಕೇವಲ ಮಾಹಿತಿ ಪಡೆಯಲು ಮಾತ್ರವಲ್ಲದೆ, ಕೊಲೆ ಮಾಡುವುದು ಹೇಗೆ?, ಮೃತದೇಹಗಳನ್ನು ವಿಲೇವಾರಿ ಮಾಡುವುದು ಹೇಗೆ?, ರಕ್ತದ ಕಲೆಗಳನ್ನು ಅಳಿಸಿ ಹಾಕುವುದು ಹೇಗೆ? ಎಂಬುದರ ಬಗ್ಗೆಯೂ ಆರೋಪಿ ಎಐ ಚಾಟ್ ಸಲಹೆ ಕೇಳಿದ್ದ ಎಂಬುದು ಪೊಲೀಸರ ವಿಚಾರಣೆಯಲ್ಲಿ ತಿಳಿದುಬಂದಿದೆ.

ಜೂನ್ 22ರಂದು ಬೆಂಗಳೂರಿನ ಕೆ.ಆರ್. ಪುರಂ ಸಮೀಪದ ಸೀಗೆಹಳ್ಳಿಯ ಅಪಾರ್ಟ್‌ಮೆಂಟ್‌ವೊಂದರಲ್ಲಿ ಮೂವರ ಬರ್ಬರ ಹತ್ಯೆ ನಡೆದಿತ್ತು. ಸೋಮಸುಂದರ್ (52), ಅವರ ಪತ್ನಿ ಮುತ್ತುಲಕ್ಷ್ಮಿ (48) ಮತ್ತು ಅವರ ಕಿರಿಯ ಮಗಳು ಸುಪ್ರಿಯಾ (19) ಅವರ ಶವಗಳು ರಕ್ತದ ಮಡುವಿನಲ್ಲಿ ಪತ್ತೆಯಾಗಿದ್ದವು. ಸಾವಿನ ಅಂತಿಮವಿಧಿ ಸೋಮಸುಂದರ್ ಅವರು ನೀಡಿದ ಮರಣೋತ್ತರ ಹೇಳಿಕೆ ಪ್ರಕರಣದ ತನಿಖೆಗೆ ಸಹಾಯ ಮಾಡಿದೆ.

ತಂತ್ರಜ್ಞಾನವನ್ನು ಆರೋಪಿ ಒಂದು ಅಸ್ತ್ರವನ್ನಾಗಿ ಬಳಸಿಕೊಂಡಿದ್ದನು. ತನಿಖೆಯ ಪ್ರಕಾರ, ಈ ಕೊಲೆಗೆ ಪ್ರಮುಖ ಕಾರಣ ಆರ್ಥಿಕ ವಿವಾದಗಳು ಮತ್ತು ಕುಟುಂಬದ ಅಸಮಾಧಾನ ಎಂಬುದು ಗೊತ್ತಾಗಿದೆ. ಆರೋಪಿ ಕೆನ್ನೆತ್ ಒಬ್ಬ ವಿಫಲ ಉದ್ಯಮಿಯಾಗಿದ್ದ, ಶ್ವೇತಾ ತನ್ನ ತಾಯಿಯಿಂದ ಸುಮಾರು 50 ಲಕ್ಷ ರುಪಾಯಿ ಸಾಲ ಪಡೆದು ಕೆನ್ನೆತ್‌ಗೆ 'ಕ್ವಿಕ್ ಕಿಚನ್' ವ್ಯವಹಾರ ಸ್ಥಾಪಿಸಲು ಸಹಾಯ ಮಾಡಿದ್ದಳು. ಆದರೆ, ಆ ಹಣವೆಲ್ಲಾ ನಷ್ಟವಾಗಿ ಸಾಲ ಮರುಪಾವತಿ ಸಾಲದ ಹೊರೆ ಮತ್ತು ವ್ಯವಹಾರದ ವೈಫಲ್ಯದಿಂದ ಉಂಟಾದ ಹತಾಶೆ ಕೆನ್ನೆತ್‌ನನ್ನು ಕ್ರೂರ ನಿರ್ಧಾರಕ್ಕೆ ತಳ್ಳಿತು. ಈ ವಿಷಯದಲ್ಲಿ ಶ್ವೇತಾ ಕೂಡ ಕುಟುಂಬದವರ ವಿರುದ್ಧ ಹೇರುತ್ತಿದ್ದರೇ ಅಥವಾ ಅವಮಾನಿಸುತ್ತಿದ್ದರೇ ಎಂಬ ಆಯಾಮಗಳಲ್ಲೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಕೆನ್ನೆತ್ ತೀವ್ರವಾದ 'ಸೋಷಿಯಲ್ ಐಸೊಲೇಶನ್' ಆಗಿ ದ್ದನು. ಶ್ವೇತಾ ತನ್ನ ಐಟಿ ಉದ್ಯೋಗವನ್ನು ಕಳೆದುಕೊಂಡು, ಸ್ನೇಹಿತರು ಮತ್ತು ಕುಟುಂಬದವರಿಂದ ಸಂಪೂರ್ಣವಾಗಿ ದೂರವಾಗಿ, ಕೆನ್ನೆತ್‌ನ ಪ್ರಭಾವಕ್ಕೆ ಒಳಗಾಗಿದ್ದಳು. ಇವರಿಬ್ಬರ ಈ ವಿಚಿತ್ರ ಮತ್ತು ಏಕಾಂತದ ಸಂಬಂಧವು ಕೊನೆಗೆ ಕೊಲೆಯಲ್ಲಿ ಅಂತ್ಯವಾಯಿತು. ಜೂ.22ರಂದು ಹತ್ಯೆಗೊಳಗಾದವರ ಅಪಾರ್ಟ್‌ಮೆಂಟ್‌ಗೆ ತೆರಳಿದ್ದರು. ಈ ವೇಳೆ ಮುತ್ತುಲಕ್ಷ್ಮಿ ಯವರನ್ನು ಅಪಾರ್ಟ್‌ಮೆಂಟ್‌ಗೆ ಕರೆಸಿ ಚಾಕುವಿನಿಂದ ಇರಿದು ಕೊಲೆ ಮಾಡಿದ್ದರು.

ಎಐ ಕಂಪನಿಗೆ ಪೊಲೀಸರ ಪತ್ರ

ಆರೋಪಿಯ ಹೇಳಿಕೆಗಳನ್ನು ಮತ್ತು ಎಐ ಚಾಟ್ ಬಾಟ್‌ನೊಂದಿಗೆ ಆತ ನಡೆಸಿದ ಸಂಭಾಷಣೆಗಳನ್ನು ತಾಳೆ ನೋಡಲು ಪೊಲೀಸರು ಸಂಬಂಧಪಟ್ಟ ಎಐ ಕಂಪನಿಗೆ ಪತ್ರ ಬರೆದಿದ್ದಾರೆ. ಡಿಜಿಟಲ್ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸುವ ಮೂಲಕ ಆರೋಪಿಯ ವಿರುದ್ಧ ಬಲವಾದ ಚಾರ್ಜ್‌ಶೀಟ್ ಸಲ್ಲಿಸಲು ಸಿದ್ಧತೆ ನಡೆಸುತ್ತಿದ್ದಾರೆ. ಎಐ ಚಾಟ್ ಇಂತಹ ಅಪರಾಧದ ಸಂಚುಗಳಿಗೆ ಮಾಹಿತಿ ನೀಡದಂತೆ ರಕ್ಷಣೆ ಅಳವಡಿ ಸಬೇಕಾದ ಅನಿವಾರ್ಯತೆ ಇದೆ ಎಂಬುದು ಪೊಲೀಸರ ಅಭಿಪ್ರಾಯವಾಗಿದೆ.

ಚಿನ್ನಾಭರಣ ಕಳ್ಳನ ಬಂಧನ

ಬೆಂಗಳೂರು: ಕೇರ್ ಟೇಕರ್ ಆಗಿ ಕೆಲಸ ಮಾಡುತ್ತಿದ್ದ ಮನೆಯಲ್ಲಿಯೇ ಚಿನ್ನಾಭರಣ ಕಳವು ಮಾಡುತ್ತಿದ್ದ ಖದೀಮನನ್ನು ವಿ.ವಿ.ಪುರ ಪೊಲೀಸರು ಬಂಧಿಸಿದ್ದಾರೆ.

ಪಶ್ಚಿಮ ಬಂಗಾಳದ ಕಾಶೀಪುರದ ಗೌತಮ್ ಬಿಸ್ವಾಸ್ (23) ಬಂಧಿತ. ಆರೋಪಿಯಿಂದ 4 ಲಕ್ಷ ರು. ಮೌಲ್ಯದ 36.18 ಗ್ರಾಂ. ಚಿನ್ನಾಭರಣಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಿನರ್ವ ಸರ್ಕಲ್ ಬಳಿ ಅನುಮಾನಾಸ್ಪದವಾಗಿ ವ್ಯಕ್ತಿಯೊಬ್ಬ ಓಡಾಡುತ್ತಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಲಭ್ಯಿಸಿದೆ. ಈ ಖಚಿತ ಮಾಹಿತಿ ಆಧಾರದ ಮೇಲೆ ಕಾರ್ಯಪ್ರವೃತ್ತರಾದ ಪೊಲೀಸರು ಸ್ಥಳಕ್ಕೆ ಬಂದು ಆ ವ್ಯಕ್ತಿಯನ್ನು ವಶಕ್ಕೆ ಪಡೆದು ವಿಚಾರಿಸಿದಾಗ ಪಶ್ಚಿಮ ಬಂಗಾಳದವನು ಎಂದು ಹೇಳಿದ್ದಾನೆ. ಈ ಸ್ಥಳದಲ್ಲಿ ಏಕೆ ಓಡಾಡುತ್ತಿದ್ದೀಯ ಎಂದು ವಿಚಾರಿಸಿದಾಗ ಸಮಂಜಸವಾದ ಉತ್ತರ ನೀಡಿಲ್ಲ. ಅನುಮಾನಗೊಂಡ ಪೊಲೀಸರು ಆತನನ್ನು ಪರಿಶೀಲಿಸಿದಾಗ ಚಿನ್ನಾಭರಣ ಕಂಡು ಬಂದಿದೆ. ತಕ್ಷಣ ಆತನನ್ನು ಠಾಣೆಗೆ ಕರೆದೊಯ್ದು ವಿಚಾರಣೆ ಮಾಡಿದಾಗ ಆಭರಣಗಳನ್ನು ಕಳವು ಮಾಡಿರುವುದಾಗಿ ಹೇಳಿದ್ದಾನೆ.

ಎಲ್ಲಿ ಈ ಆಭರಣಗಳನ್ನು ಕಳವು ಮಾಡಲಾಗಿದೆ ಎಂಬ ಬಗ್ಗೆ ಸರಿಯಾದ ಮಾಹಿತಿ ನೀಡಿಲ್ಲ, ಆತನನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡು ಸುದೀರ್ಘ ವಿಚಾರಣೆ ನಡೆಸಿದಾಗ ನಾನು ಹೆಲ್ಪರ್ ಕೆಲಸ ಏಜೆನ್ಸಿಯೊಂದರ ಮೂಲಕ ಚಿಕ್ಕಲ್ಲಾಸಂದ್ರದ ನಿವಾಸಿ ಪಿ.ಎನ್.ಬಾಬು ಎಂಬುವವರ ಮನೆಯಲ್ಲಿ ಕೇರ್ ಟೇಕರ್ ಕೆಲಸಕ್ಕೆ ಸೇರಿಕೊಂಡು ಅವರ ಮನೆಯಲ್ಲಿ ಆಭರಣಗಳನ್ನು ಕಳವು ಮಾಡಿ ಇಟ್ಟುಕೊಂಡಿರುವುದಾಗಿ ಮತ್ತು ಅವುಗಳನ್ನು ಮಾರಾಟ ಮಾಡಲು ಬಂದಿದ್ದಾಗಿ ಬಾಯ್ಬಿಟ್ಟಿದ್ದಾನೆ. ಆರೋಪಿಯಿಂದ 36.18 ಗ್ರಾಂ. ಆಭರಣಗಳನ್ನು ವಶಕ್ಕೆ ಪಡೆಯಲಾಗಿದೆ. ಇನ್ಸ್‌ಪೆಕ್ಟರ್ ಶಂಕರ್ ಅವರನ್ನೊಳಗೊಂಡ ಸಿಬ್ಬಂದಿ ತಂಡ ಯಶಸ್ವಿಯಾಗಿದ್ದು, ಆರೋಪಿಗೆ ನೋಟಿಸ್ ಜಾರಿ ನೀಡಿ ಕಳುಹಿಸಲಾಗಿದೆ.

ಯುವತಿಗೆ ಪ್ರೇತಿ ಎಂದು ಇನ್‌ಸ್ಟಾ ಸಂದೇಶ ವಿದ್ಯಾರ್ಥಿ ವಿರುದ್ಧದ ಪ್ರಕರಣ ರದ್ದು

ಬೆಂಗಳೂರು: ಪೊಲೀಸ್ ಅಧಿಕಾರಿಯೊಬ್ಬರ ಮಗಳಾಗಿರುವ ಕಾಲೇಜು ಸಹಪಾಠಿಗೆ ಇನ್ಸ್ಟಾಗ್ರಾಮ್ ಸಂದೇಶದಲ್ಲಿ 'ಪ್ರೀತಿ' (ಸುಂದರ) ಎಂದು ಸಂಬೋಧಿಸಿ ಎಂಬುದಾಗಿ ಹೊಗಳಿದ ಆರೋಪಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಯೊಬ್ಬನ ವಿರುದ್ಧ ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿ ಆದೇಶಿಸಿದೆ.

ಇದರಿಂದ ಯುವಕನ ಇಡೀ 'ಜೆನ್ ಜಿ' ಶೈಲಿಯಲ್ಲಿ ಮಾತನಾಡಿದ್ದಕ್ಕೆ ಮಾನಸಿಕ ತೊಂದರೆ ಅಥವಾ ಮಹಿಳೆಯ ಮೇಲೆ ದೌರ್ಜನ್ಯ ಎಸಗಿದ್ದಾರೆ ಎಂಬುದಾಗಿ ಆರೋಪಿಸಲಾಗುವುದಿಲ್ಲ ಎಂದು ಪೀಠ ಹೇಳಿದೆ. ಘಟನೆಯ ವಿರುದ್ಧ ಮಣಿಪಾಲ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಈ ಆದೇಶ ಹೊರಡಿಸಿದ್ದು, ವಿದ್ಯಾರ್ಥಿಯೊಬ್ಬನ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ರದ್ದುಗೊಳಿಸಿದೆ. ಅಲ್ಲದೆ, ಈ ರೀತಿಯ ಪ್ರಕರಣಗಳಲ್ಲಿ ಯುವಜನರ ನಡುವಿನ ಖಾಸಗಿ ಸಂಭಾಷಣೆಗಳನ್ನು ಅಪರಾಧೀಕರಿಸಲು ಸಾಧ್ಯವಿಲ್ಲ, ಅಲ್ಲದೆ, ಇಬ್ಬರ ನಡುವೆ ನಡೆದಿರುವ ಸಂಭಾಷಣೆ ಸಾರ್ವಜನಿಕ ವೇದಿಕೆಯಲ್ಲ, ಬದಲಿಗೆ ಇಬ್ಬರು ವ್ಯಕ್ತಿಗಳ ನಡುವಿನ ಖಾಸಗಿ ಸಂವಹನವಾಗಿದೆ. ಇದು ಸಾರ್ವಜನಿಕ ಚಾಟ್ ಅಲ್ಲ. ಇಬ್ಬರ ನಡುವಿನ ಸಂಭಾಷಣೆ. ಇಂದಿನ ವಿದ್ಯಾರ್ಥಿಗಳು ಬಳಸುವ ಭಾಷೆಯಿದು. ಇದು ಹೇಗೆ ಅಪರಾಧವಾಗುತ್ತದೆ? ಇಂದಿನ ಕಾಲದ ಯುವಜನರು ಬಳಸುವ ಆಡುಭಾಷೆ ಮತ್ತು ಶೈಲಿಯನ್ನು ಅಪರಾಧ ಕೃತ್ಯ ಎಂದು ಪರಿಗಣಿಸಲು ಬರುವುದಿಲ್ಲ. ಅದು ಕಾನೂನು ಪ್ರಕ್ರಿಯೆಯ ದುರ್ಬಳಕೆಯಾಗುತ್ತದೆ ಎಂದು ಪೀಠ ಹೇಳಿದೆ.

ಪ್ರಕರಣದ ಹಿನ್ನೆಲೆ

20 ವರ್ಷದ ಕಾಲೇಜು ವಿದ್ಯಾರ್ಥಿಯೊಬ್ಬ ತನ್ನ 21 ವರ್ಷದ ಸಹಪಾಠಿ ಮತ್ತು ಸ್ನೇಹಿತೆಗೆ ಇನ್ಸ್ಟಾಗ್ರಾಮ್‌ನಲ್ಲಿ ಫೋಟೋ ಒಂದಕ್ಕೆ ಪ್ರತಿಕ್ರಿಯಿಸಿ 'ಪ್ರೇತಿ' ಹಾಗೂ 'ಬ್ಯೂಟಿಫುಲ್' ಎಂದು ಸಂದೇಶ ಕಳುಹಿಸಿದ್ದ. ಆರಂಭದಲ್ಲಿ ಆ ಯುವತಿ 'ಥ್ಯಾಂಕ್' ಎಂದು ಪ್ರತ್ಯುತ್ತರ ಕೂಡ ನೀಡಿದ್ದಳು. ಆದರೆ, ನಂತರ ಈ ಚಾಟ್ ಅನ್ನು ಹಿರಿಯ ಪೊಲೀಸ್ ಅಧಿಕಾರಿಯಾಗಿರುವ ಯುವತಿಯ ತಂದೆಯ ಗಮನಕ್ಕೆ ತರಲಾಗಿದ್ದು, ವಿದ್ಯಾರ್ಥಿಯ ವಿರುದ್ಧ ದೂರು ದಾಖಲಿಸಿದ್ದರು.

ಮ್ಯಾನ್ಮಾರ್ ಸೈಬರ್ ವಂಚನೆ ಜಾಲದಲ್ಲಿ ಸಿಲುಕಿದ್ದ ಇಬ್ಬರು ಕನ್ನಡಿಗರ ರಕ್ಷಣೆ

ಬೆಂಗಳೂರು: ಮ್ಯಾನ್ಮಾರ್‌ನಲ್ಲಿ ನಡೆಯುತ್ತಿದ್ದ ಚೀನಾ ನಿಯಂತ್ರಿತ ಸೈಬರ್ ಕ್ರೈಮ್ ವಂಚಕರ ಜಾಲದಲ್ಲಿ ಸಿಲುಕಿದ್ದ ಇಬ್ಬರು ಭಾರತೀಯ ಪ್ರಜೆಗಳನ್ನು ಕರ್ನಾಟಕ ಸೈಬರ್ ಕಮಾಂಡ್, ಇಂಡಿಯನ್ ಸೈಬರ್ ಕ್ರೈಮ್ ಕೋ-ಆರ್ಡಿನೇಷನ್ ಸೆಂಟರ್, ಜಾರಿ ನಿರ್ದೇಶನಾಲಯ ಮತ್ತು ಮ್ಯಾನ್ಮಾರ್‌ನ ಭಾರತೀಯ ರಾಯಭಾರ ಕಚೇರಿಯ ಸಹಯೋಗದೊಂದಿಗೆ ಯಶಸ್ವಿಯಾಗಿ ರಕ್ಷಿಸಲಾಗಿದೆ.

ರಕ್ಷಿಸಲ್ಪಟ್ಟಿರುವ ಇಬ್ಬರ ಯುವಕರು ಕರ್ನಾಟಕದ ನಿವಾಸಿಗಳಾಗಿದ್ದು, ಸುರಕ್ಷಿತವಾಗಿ ಭಾರತಕ್ಕೆ ಕರೆತರಲಾಗಿದೆ. ವಿದೇಶದಲ್ಲಿರುವ ಭಾರತೀಯ ಪ್ರಜೆಗಳ ರಕ್ಷಣೆಗಾಗಿ ಗುಪ್ತಚರ ಮಾಹಿತಿ ವಿನಿಮಯ ಮತ್ತು ರಾಜತಾಂತ್ರಿಕ-ಕಾನೂನು ಜಾರಿ ಸಂಸ್ಥೆಗಳ ನಡುವಿನ ಸಮನ್ವಯ ಎಷ್ಟು ಪರಿಣಾಮಕಾರಿ ಎಂಬುದಕ್ಕೆ ಈ ಕಾರ್ಯಾಚರಣೆ ಸಾಕ್ಷಿಯಾಗಿದೆ ಎಂದು ಕರ್ನಾಟಕ ಸೈಬರ್ ಕಮಾಂಡ್ ಸೆಂಟರ್ ಅಧಿಕಾರಿಗಳು ತಿಳಿಸಿದ್ದಾರೆ.

ಇ.ಡಿ ಅಧಿಕಾರಿಗಳಿಂದ ಲಭ್ಯವಾದ ಮಾಹಿತಿಯನ್ನು ಆಧರಿಸಿ ಕರ್ನಾಟಕ ಸೈಬರ್ ಕಮಾಂಡ್ ಸೆಂಟರ್, ಕೂಡಲೇ ಇಂಡಿಯನ್ ಸೈಬರ್ ಕ್ರೈಮ್ ಕೋ-ಆರ್ಡಿನೇಷನ್ ಸೆಂಟರ್, ಮ್ಯಾನ್ಮಾರ್‌ನ ಭಾರತೀಯ ರಾಯಭಾರ ಕಚೇರಿಯ ಅಧಿಕಾರಿಗಳೊಂದಿಗೆ ಸಂಪರ್ಕ ಸಾಧಿಸಿತ್ತು. ಅತ್ಯಂತ ಕಡಿಮೆ ಸಮಯದಲ್ಲಿ ಕಾರ್ಯಾಚರಣೆ ನಡೆಸಿ ಇಬ್ಬರೂ ಯುವಕರನ್ನು ರಕ್ಷಿಸಲಾಯಿತು ಎಂದು ಕರ್ನಾಟಕ ಸೈಬರ್ ಕಮಾಂಡ್‌ನ ಪೊಲೀಸ್ ಮಹಾನಿರ್ದೇಶಕ ಪ್ರಣಬ್ ಮೊಹಂತಿ ಮಾಹಿತಿ ಹಂಚಿಕೊಂಡಿದ್ದಾರೆ.

ಕೆಜಿಎಫ್ ಮೂಲದವರಾಗಿದ್ದು, ದ್ವಿತೀಯ ಪಿಯುಸಿ ವ್ಯಾಸಾದ ಬಳಿಕ ಬಿಪಿಒ ಸಂಸ್ಥೆಯೊಂದರಲ್ಲಿ ಕೆಲಸ ಮಾಡುತ್ತಿದ್ದೆವು. ಸಂಸ್ಥೆ ಮುಚ್ಚಲ್ಪಟ್ಟ ಬಳಿಕ ಹೊಸ ಉದ್ಯೋಗಕ್ಕಾಗಿ ಹುಡುಕಾಟ ನಡೆಸುತ್ತಿದ್ದಾಗ ಫೇಸ್‌ಬುಕ್‌ನ ಮೂಲಕ ಕಂಡುಬಂದ ಥೈಲ್ಯಾಂಡ್‌ನ 'ಚಾಟ್ ಪ್ರೊಸೆಸ್' ಉದ್ಯೋಗದ ಜಾಹೀರಾತಿಗೆ ಅರ್ಜಿ ಸಲ್ಲಿಸಿದ್ದೆವು. ಆನ್‌ಲೈನ್ ಸಂದರ್ಶನದ ಬಳಿಕ ಇಬ್ಬರಿಗೂ ವೀಸಾ ಮತ್ತು ವಿಮಾನ ಟಿಕೆಟ್‌ಗಳನ್ನು ನೀಡಲಾಗಿತ್ತು. ಕಳೆದ ವಾರ ಪ್ರಯಾಣ ಬೆಳೆಸುವ ಕೇವಲ ಐದು ಗಂಟೆಗೂ ಮುನ್ನ ಕರೆ ಮಾಡಿದ್ದ ರಾಯ್ ಎಂಬಾತ, ತಾನು ಲೈನ್ ಮ್ಯಾನೇಜರ್ ಅಂತ ಪರಿಚಯಿಸಿಕೊಂಡಿದ್ದ. ನಾವು ಬ್ಯಾಂಕಾಕ್‌ನಲ್ಲಿ ಇಳಿದಾಗ ನಮ್ಮನ್ನು ಮೊದಲು ಕ್ಯಾಬ್‌ನಲ್ಲಿ ಕರೆದೊಯ್ಯಲಾಗಿತ್ತು. ಮರುದಿನ ಬೆಳಗ್ಗೆ, ಬೈಕ್‌ನಲ್ಲಿ ಬಂದ ಇಬ್ಬರು ವ್ಯಕ್ತಿಗಳು ನಮ್ಮನ್ನು ನದಿಯೊಂದರ ಬಳಿ ಕರೆದೊಯ್ದರು. ಅಲ್ಲಿ ಮಷಿನ್ ಗನ್ ಹಿಡಿದು ಸೇನಾ ಸಮವಸ್ತ್ರದಲ್ಲಿದ್ದ ವ್ಯಕ್ತಿಗಳ ಕಾವಲಿನಲ್ಲಿ ನಮ್ಮನ್ನು ಬಲವಂತವಾಗಿ ದೋಣಿಗೆ ಹತ್ತಿಸಲಾಯಿತು ಎಂದು ಸಂತ್ರಸ್ತರು ತಮ್ಮ ಮುಂದೆ ವಿವರಿಸಿದ್ದಾಗಿ ಪೊಲೀಸರು ತಿಳಿಸಿದ್ದಾರೆ.

ಅಲ್ಲಿಂದ ಕಟ್ಟುನಿಟ್ಟಿನ ಭದ್ರತೆಯಿರುವ ಸ್ಥಳಕ್ಕೆ ಇಬ್ಬರನ್ನೂ ಕರೆದೊಯ್ಯಲಾಯಿತು. ನಮಗೆ ಭರವಸೆ ನೀಡಿದ್ದ ಉದ್ಯೋಗದ ಬದಲಿಗೆ, ಅಮೆರಿಕದಲ್ಲಿರುವ ಭಾರತೀಯ ಮೂಲದವರನ್ನು ಗುರಿಯಾಗಿಸಿಕೊಂಡು ಸೈಬರ್ ವಂಚನೆ ಮಾಡುವ ಕೆಲಸಕ್ಕೆ ತಳ್ಳಲಾಯಿತು. ತೀವ್ರ ಕಣ್ಗಾವಲಿದ್ದ ಆ ಸ್ಥಳದಲ್ಲಿ ಕೆಲಸಕ್ಕೆ ಕೇವಲ 10 ಸೆಕೆಂಡ್ ತಡವಾದರೆ ಅಥವಾ ನಿಯಮ ಉಲ್ಲಂಘಿಸಿದರೆ ಸಿಟ್-ಅಪ್ಸ್, 30-40 ರೌಂಡ್ ರನ್ನಿಂಗ್, ಮರದ ಕೋಲುಗಳಿಂದ ಹೊಡೆಯುವುದು ಹಾಗೂ ವಿದ್ಯುತ್ ಶಾಕ್ ನೀಡಿ ಏಕಾಂತ ಬಂಧನದಲ್ಲಿಡುವುದು ಸೇರಿದಂತೆ ಮುಂತಾದ ಭೀಕರ ಕರುಣೆಗೆ ನೀಡಲಾಗುತ್ತಿತ್ತು. ಅವರದ್ದೇ ಕಣ್ಣಾವಲಿನಲ್ಲಿ ಪ್ರತಿದಿನ ಕೇವಲ ಒಂದು ಗಂಟೆ ಮಾತ್ರ ಮೊಬೈಲ್ ಬಳಸಲು ಅವಕಾಶ ನೀಡಲಾಗುತ್ತಿತ್ತು ಎಂದು ಯುವಕರು ವಿವರಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮದ್ಯದಲ್ಲಿ ಇಂಕ್ ಸೇವಿಸಿ ಆತ್ಮಹತ್ಯೆ

ಬೆಂಗಳೂರು: ಮದ್ಯದಲ್ಲಿ ಇಂಕ್ ಬೆರೆಸಿ ಸೇವಿಸಿ ತೀವ್ರ ಅಸ್ವಸ್ಥನಾಗಿದ್ದ ಯುವಕ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿರುವ ಘಟನೆ ಮಂಗಳವಾರ ಮಧ್ಯಾಹ್ನ ಕಾಟನ್ ಪೇಟೆ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಆನಂದ್ ಕುಮಾರ್ (25) ಮೃತ ದುರ್ದೈವಿ. ಮೃತ ಆನಂದ್ ಕುಮಾರ್ ತಮ್ಮ ಸಹ ಇತ್ತೀಚೆಗೆ ಆತ್ಮಹತ್ಯೆಗೆ ಶರಣಾಗಿದ್ದರು. ಸಹೋದರನ ಸಾವಿನ ಬಳಿಕ ಮಾನಸಿಕವಾಗಿ ನೊಂದಿದ್ದ ಆನಂದ್ ಕುಮಾರ್ ಅತಿಯಾದ ಮದ್ಯಪಾನ ಅಭ್ಯಾಸ ಆರಂಭಿಸಿದ್ದನು. ಮಂಗಳವಾರ ಮಧ್ಯಾಹ್ನ 1 ಗಂಟೆ ಸುಮಾರಿಗೆ ಮನೆಯಲ್ಲಿ ಮದ್ಯದೊಂದಿಗೆ ಇಂಕ್ ಬೆರೆಸಿ ಕುಡಿದು ತೀವ್ರ ಅಸ್ವಸ್ಥನಾಗಿದ್ದ. ತಕ್ಷಣ ಕುಟುಂಬದವರು ಆಸ್ಪತ್ರೆಗೆ ದಾಖಲಿಸಿದ್ದರು. ದುರಾದೃಷ್ಟವಶಾತ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಆತ ಮೃತಪಟ್ಟಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ. ಅಸಹಜ ಸಾವು ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಕಾಟನ್ ಪೇಟೆ ಠಾಣೆ ಪೊಲೀಸರು ತಿಳಿಸಿದ್ದಾರೆ.

ಬೀಚ್‌ಗಳಿಗೆ ಪ್ರತ್ಯೇಕ ಯೋಜನೆ

ಬೆಂಗಳೂರು: ಕರ್ನಾಟಕದ ಕರಾವಳಿ ಪ್ರದೇಶದಲ್ಲಿರುವ ಸಿಆರ್‌ಝಡ್ ವ್ಯಾಪ್ತಿಯ ಸಮುದ್ರ ತೀರಗಳ ಸಮಗ್ರ ಅಧ್ಯಯನ ನಡೆಸಿ, ಪ್ರತಿಯೊಂದು ಬೀಚ್‌ಗೆ ಅದರ ವೈಶಿಷ್ಟ್ಯಕ್ಕೆ ಅನುಗುಣವಾದ ಪ್ರತ್ಯೇಕ ಪ್ರವಾಸೋದ್ಯಮ ಅಭಿವೃದ್ಧಿ ಮಾಸ್ಟರ್ ಪ್ಲಾನ್ ಸಿದ್ಧಪಡಿಸುವಂತೆ ಇಲಾಖೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸುಮಾರು 320 ಕಿ.ಮೀ ಉದ್ದದ ಕರಾವಳಿ ಹೊಂದಿರುವ ಕರ್ನಾಟಕದಲ್ಲಿ ಬೀಚ್ ಪ್ರವಾಸೋದ್ಯಮ, ಸಮುದ್ರ ಆಧಾರಿತ ಸಾಹಸ ಚಟುವಟಿಕೆಗಳು, ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕೆ ಅಪಾರ ಅವಕಾಶಗಳಿವೆ. ಸಿಆರ್‌ಝಡ್ ನಿಯಮಾವಳಿಗಳ ಅಡಿಯಲ್ಲಿ ಹಲವು ಬೀಚ್‌ಗಳನ್ನು ಪ್ರವಾಸೋದ್ಯಮ ಅಭಿವೃದ್ಧಿಗೆ ಅವಕಾಶವಿದ್ದರೂ, ಅವುಗಳ ಸಾಮರ್ಥ್ಯ ಸಮಗ್ರವಾಗಿ ಅಧ್ಯಯನ ಮಾಡಿ ಯೋಜನಾಬದ್ಧ ಅಭಿವೃದ್ಧಿಗೆ ಇದುವರೆಗೆ ಕ್ರಮ ಕೈಗೊಳ್ಳಲಾಗಿಲ್ಲ ಎಂದರು. ಪ್ರತಿಯೊಂದು ಬೀಚ್‌ನ ಪ್ರವಾಸೋದ್ಯಮ ಸಾಮರ್ಥ್ಯ, ರಸ್ತೆ ಮತ್ತು ಇತರ ಸಂಪರ್ಕ ವ್ಯವಸ್ಥೆ, ಪರಿಸರ ಸಂವೇದನಾಶೀಲತೆ, ಸಾರ್ವಜನಿಕ ಹಾಗೂ ಖಾಸಗಿ ಹೂಡಿಕೆ ಸಾಧ್ಯತೆ, ಸ್ಥಳೀಯರ ಉದ್ಯೋಗ ಮತ್ತು ಆರ್ಥಿಕ ಲಾಭದ ಆಧಾರದ ಅಧ್ಯಯನ ಮಾಡಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಕರ್ತವ್ಯಕ್ಕೆ ಅಡ್ಡಿ: ಪ್ರಮುಖ ಆರೋಪಿ ಸೆರೆ

ಬೆಂಗಳೂರು: ಪಾದಚಾರಿ ಮಾರ್ಗಗಳ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆ ತೆರಳಿದ್ದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದ್ದ ಪ್ರಕರಣದ ಪ್ರಮುಖ ಆರೋಪಿಯನ್ನು ಕಮರ್ಷಿಯಲ್ ಸ್ಟ್ರೀಟ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಸವರಾಜ್ ಪಡುಕೋಟೆ ಎಂಬಾತನೇ ಬಂಧಿತ ಆರೋಪಿ. ಮಂಗಳವಾರ ಬೆಳಗ್ಗೆ ಶಿವಾಜಿನಗರದಲ್ಲಿ ಜಿಬಿಎ ವತಿಯಿಂದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಯುತ್ತಿತ್ತು. ಸ್ಥಳಕ್ಕೆ ನಮ್ಮ ಕರ್ನಾಟಕ ಸೇನೆ ಹೆಸರಿನ ಸಂಘಟನೆ ರಾಜ್ಯಾಧ್ಯಕ್ಷ ಬಸವರಾಜ್ ಪಡುಕೋಟೆ ನೇತೃತ್ವದಲ್ಲಿ ಬಂದಿದ್ದ ಆರೋಪಿಗಳು, ಪಾಲಿಕೆ ಸಿಬ್ಬಂದಿ ಮತ್ತು ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದರು. ಘಟನೆ ಬಳಿಕ ತಲೆಮರೆಸಿಕೊಂಡಿದ್ದ ಬಸವರಾಜ್, ನಾವು ಫುಟ್‌ಪಾತ್ ತೆರವು ವಿರೋಧಿಸಿ ಹೋರಾಟ ಮಾಡಿದ್ದು, ಸ್ಥಳದಲ್ಲಿ ನಮ್ಮ ಸಂಘಟನೆಯಿಂದ ಕನ್ನಡ ಧ್ವಜ ಹಾರಿಸಲಾಗಿತ್ತು ಮತ್ತು ಗಣೇಶ ದೇವಸ್ಥಾನವಿತ್ತು. ಸ್ಥಳದಲ್ಲಿದ್ದ ಅಧಿಕಾರಿಗಳು ಯಾವುದನ್ನೂ ತೆರವುಗೊಳಿಸಬಾರದು ಎಂದು ಉದ್ದೇಶದಿಂದ ಮಾತನಾಡಿದ್ದೇವೆ. ಅದಕ್ಕೆ ನಾವು ಪ್ರತಿರೋಧಿಸಿದ್ದೇವೆ. ನಾನೇ ನಾನೇ ಪೊಲೀಸರಿಗೆ ಶರಣಾಗುತ್ತೇನೆ ಎಂದು ಅಜ್ಞಾತ ಸ್ಥಳದಿಂದ ವಿಡಿಯೋ ಬಿಡುಗಡೆ ಮಾಡಿದ್ದ. ಆದರೆ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಕಮರ್ಷಿಯಲ್ ಸ್ಟ್ರೀಟ್ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

ಘಟನೆ ನಡೆದ ದಿನವೇ ಗಂಟೆಗಳಲ್ಲಿ ಕಿರಣ್ (34), ಬಸವರಾಜ್ (28), ರಂಜಿತ್ (19), ರಂಗಸ್ವಾಮಿ (49), ಮುಜಾಹಿದ್ ಅಹಮದ್ (39) ಕೊಟ್ರೇಶ್ (26), ಪರಶುರಾಮ್ (27), ರಘು (28) ಪಾರ್ಥಿಬನ್ (23) ಹಾಗೂ ಭರತ್ (24) ಎಂಬ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದರು.

ಪಾದಚಾರಿ ಮಾರ್ಗಗಳ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆ ಅಡ್ಡಿ ಪಡಿಸಿ, ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿರುವುದು ಗಂಭೀರ ಪ್ರಕರಣ. ಇಲ್ಲಿಯವರೆಗೂ ಒಟ್ಟು 12 ಆರೋಪಿಗಳನ್ನು ಬಂಧಿಸಲಾಗಿದೆ. ಪ್ರಮುಖ ಆರೋಪಿಯ ವಿರುದ್ಧ ಆತ ವಾಸವಾಗಿ ರುವ ವ್ಯಾಪ್ತಿಯಲ್ಲಿನ ಸ್ಥಳೀಯ ಠಾಣೆಯಲ್ಲಿ ರೌಡಿಶೀಟರ್ ಸಹ ಇದೆ. ಈ ಪ್ರಕರಣದಲ್ಲಿ ಕಾನೂನು ಪ್ರಕಾರ ಎಲ್ಲ ಕ್ರಮ ಕೈಗೊಳ್ಳಲಿದ್ದೇವೆ
- ಸೀಮಂತ್ ಕುಮಾರ್ ಸಿಂಗ್
ಬೆಂಗಳೂರು ನಗರ ಪೊಲೀಸ್ ಆಯುಕ್ತ

ಐವರನ್ನು ಕಸ್ಟಡಿಗೆ ನೀಡಿದ ಕೋರ್ಟ್

ಶಿವಾಜಿನಗರದಲ್ಲಿ ಜಿಬಿಎ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಪಾದಚಾರಿ ಒತ್ತುವರಿ ತೆರವು ವೇಳೆ ಅಧಿಕಾರಿಗಳ ಮೇಲೆ ಹಲ್ಲೆ ನಡೆದಿತ್ತು. ಪ್ರಕರಣ ಸಂಬಂಧ ಐವರು ಆರೋಪಿಗಳನ್ನು ಬಂಧಿಸಿ 10ನೇ ಎಸಿಎಂಎಂ ಮ್ಯಾಜಿಸ್ಟ್ರೇಟ್ ಕೋರ್ಟ್ ಮುಂದೆ ಹಾಜರುಪಡಿಸಲಾಗಿತ್ತು. ಆರೋಪಿಗಳನ್ನು ನಾಲ್ಕು ದಿನ ಪೊಲೀಸ್ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ. 12 ಜನ ಆರೋಪಿಗಳನ್ನು ಕೋರ್ಟ್ ಮುಂದೆ ಹಾಜರುಪಡಿಸಲಾಗಿತ್ತು. ಬಸವರಾಜ್ ಪಡುಕೋಟೆ, ರಘು, ಬಸವರಾಜ್, ಪಾರ್ಥಿಬನ್, ಪರಶುರಾಮ್ ಆರೋಪಿಗಳನ್ನು ಕೋರ್ಟ್ ಕಸ್ಟಡಿಗೆ ನೀಡಿದೆ.